# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 721(782)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ನಗರಾಭಿವೃದ್ಧಿ ಇಲಾಖೆಯಿಂದ ಸಿಂಗಲ್ ಸೈಟ್ ಲೇಔಟ್ ಅನುಮತಿ ನೀಡುವ ಕುರಿತು

(ಅ) ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಿಗಳು ಸಣ್ಣ ಜಾಗಗಳಲ್ಲಿ ಕಡು ಬಡವರಿಗೆ ಮನೆಯನ್ನು ಕಟ್ಟಲು ಸಿಂಗಲ್ ಸೈಟ್ ಲೇಔಟ್ ಅನುಮತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಿಂಗಲ್ ಸೈಟ್ ಲೇಔಟ್‌ಗಾಗಿ ಮನವಿ ಸಲ್ಲಿಸಿದ ಎಷ್ಟು ದಿನಗಳ ಒಳಗಾಗಿ ಸಂಬಂಧಿಸಿದ ನಗರಾಭಿವೃದ್ಧಿ ಪ್ರಾಧಿಕಾರಗಳು ಅನುಮತಿಯನ್ನು ನೀಡುತ್ತವೆ; ಈ ಕುರಿತು ಇರುವ ನಿಯಮಗಳೇನು;

(ಇ) ನಗರಾಭಿವೃದ್ಧಿ ಪ್ರಾಧಿಕಾರಗಳು ಅಧಿಕಾರಿಗಳಿಗೆ ಲಂಚ ಸಂಗ್ರಹಿಸಿ ನೀಡುವ ಬ್ರೋಕರ್‌ಗಳ ಅಡ್ಡೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು?